## **ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕಿನ ಗೋರನಾಳ ಮತ್ತು ಇತರೆ 04 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ಮಸಳಿ ಬಿ.ಕೆ. ಗ್ರಾಮದ ಮಸಳಿ ಬಿ.ಕೆ. ಜನವಸತಿಯ 1665 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ (FHTC) ಕಲ್ಪಿಸುವ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/227/ಗ್ರಾನೀಸ(4)2022 ದಿನಾಂಕ:04.04.2022.
2. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ. ಇಲಾಖೆ ಇವರ ಕಡತ ಸಂ:ಗ್ರಾಕುನೀ&ನೈಇ/549/ಮುಇಂ/ತಾಂತ್ರಿಕ/2021–22

-----

**ಪೀಠಿಕೆ:**

ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕಿನ ಗೋರನಾಳ ಮತ್ತು ಇತರೆ 04 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ಮಸಳಿ ಬಿ.ಕೆ. ಗ್ರಾಮದ ಮಸಳಿ ಬಿ.ಕೆ. ಜನವಸತಿಯ 1665 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ (FHTC) ಕಲ್ಪಿಸುವ ಕಾಮಗಾರಿಗೆ ಮೇಲೆ ಓದಲಾದ(1)ರ ಆದೇಶದಲ್ಲಿ **ರೂ.314.00ಲಕ್ಷಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯ ಕಾಮಗಾರಿಯನ್ನು 2021–22ನೇ ಸಾಲಿನ ಏಕರೂಪ ಅನುಸೂಚಿತ ದರಪಟ್ಟಿಯಂತೆ ಅಂದಾಜು ಪಟ್ಟಿಯನ್ನು ತಯಾರಿಸಿರುವುದರಿಂದ ಅಂದಾಜು ಮೊತ್ತವು **ರೂ.411.00ಲಕ್ಷಗಳಿಗೆ** ಪರಿಷ್ಕೃತಗೊಂಡಿರುತ್ತದೆ.

ಮೇಲೆ(2)ರಲ್ಲಿ ಓದಲಾದ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರ ಕಡತದಲ್ಲಿ **ರೂ.411.00ಲಕ್ಷಗಳ ಪರಿಷ್ಕೃತ** ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ವಿಜಯಪುರ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ: ಗ್ರಾಕುನೀ&ನೈಇ/227/ಗ್ರಾನೀಸ(4)/2022 ಬೆಂಗಳೂರು ದಿನಾಂಕ:30.09.2022** 1605

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕಿನ ಗೋರನಾಳ ಮತ್ತು ಇತರೆ 04 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ಮಸಳಿ ಬಿ.ಕೆ. ಗ್ರಾಮದ ಮಸಳಿ ಬಿ.ಕೆ. ಜನವಸತಿಯ 1665 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ (FHTC) ಕಲ್ಪಿಸುವ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ **ರೂ.411.00ಲಕ್ಷ (ನಾಲ್ಕು ನೂರ ಹನ್ನೊಂದು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ** ಈ ಆದೇಶಕ್ಕೆ ಲಗತ್ತಿಸಿರುವ ಘೋಷ್ವಾರೆಯನ್ವಯ **ಜಲ ಜೀವನ ಮಿಷನ್ (JJM) ಕಾರ್ಯಕ್ರಮದಡಿ** ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತಾಪಿತ ಕಾಮಗಾರಿಯ ಪರಿಷ್ಕೃತ ಹೆಚ್ಚುವರಿ ಮೊತ್ತಕ್ಕೆ ಸಕ್ಷಮ ಪ್ರಾಧಿಕಾರದಿಂದ ಅವಶ್ಯವಿರುವ ಅನುಮೋದನೆ ಪಡೆದು ನಂತರ ಮುಂದಿನ ಕ್ರಮವಹಿಸಬೇಕು. ಅನುಮೋದನೆ ನೀಡಲಾದ ಅಂದಾಜಿನ ವ್ಯಾಪ್ತಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸತಕ್ಕದ್ದು. ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಉಳಿದಂತೆ ಈ ಹಿಂದೆ ಹೊರಡಿಸಿರುವ ಆದೇಶದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ನಿರ್ದೇಶಕರು
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ವಿಜಯಪುರ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ವಿಜಯಪುರ.**
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಳಗಾವಿ.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸಂಪಾದಕರು,"ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ವಿಜಯಪುರ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
16. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರದ ಪತ್ರದ ಸಂಖ್ಯೆ: ಗ್ರಾಕುನೀಸನೈಇ/224/ಗ್ರಾನೀಸ(4)2022 ಬೆಂಗಳೂರು ದಿನಾಂಕ: 30.09.2022 ರ ಪತ್ರ

# ABSTRACT OF ESTIMATE

Name of work :Providing FHTC's to 1921 Households in MASALI BK habitation of MASALI BK village,through MVS GORNAL and other 4 Villages (55 LPCD) of Indi Taluka in Bijapur District

| Sl. No. | Name of sub Works | | Amount (in Rs.) |
|---|---|---|---|
| | **PART -A** | | |
| 1 | Provision for Construction of ELSR 25000 capacity,9.0m stg | 25KL | 1454461.00 |
| 2 | Providing bulk flow meter | | 203677.00 ~~305695.00~~ |
| | Sub total of Part -A | | 203677.00 ~~1760156.00~~ |
| | Add 18% GST | | 36661.86 ~~316828.08~~ |
| 2 | Add for Third party inspection 0.5% | | 1018.39 ~~8800.78~~ |
| 3 | Add for DPR preparation 0.46% | | 936.91 ~~8096.72~~ |
| | Add 18% GST | | 351.95 ~~3041.65~~ |
| | Total of Part -A | | 242646.11 ~~2096923.13~~ |
| | Cost per FHTC | 1665 | 106.03 ~~916.27~~ |
| | **PART -B** | | |
| 1 | Distribution Pipe Line | 23536 | 17989369.28 |
| 2 | Household connections [FHTC] | | 14620358.98 |
| | Sub Total Part -B | | 32609728.26 |
| | Add 18% GST | | 5869751.09 |
| 3 | Add for Third party inspection 0.5% | | 163048.64 |
| 4 | Add for DPR preparation 0.46% | | 150004.75 |
| | Add 18% GST | | 56349.61 |
| | **Total of Part -B** | | **38848882.35** |
| | Total cost of Part -A & B | | 39091528.46 ~~40945805.47~~ |
| | ~~tal Part-A+GST +sub Total Part-A+GST)Tender premium @10%~~ Rounding off | | 53895.12 ~~4094580.55~~ |
| | Other expenditur & Miscelleinous | | 1954576.42 ~~59613.98~~ |
| | **Grand Total** | | 41100000.00 ~~45100000.00~~ |
| | Amount in Lakh | | 411.00 ~~451.00~~ |
| | Cost per FHTC | 1665 | 20223 |

"ಅನುಮೋದಿಸಿದೆ"

Section Officer

Director
Rural Drinking Water & Sanitation Dept. &
Ex-Officio Deputy Secretary
Rural Development & Panchayatn Raj Dept.

Assistant Executive Enginee
RDW&S Sub division Indi

Chief Engineer
Rural Drinking Water & Sanitation Department
2nd Floor, 'E' Block, KHB Complex,
Cauvery Bhavan, K. G. Road, Bangalore-9.

EXECUTIVE ENGINEER
RDW&S Sub division VIJAYAPURA

Superintending Engineer
Rural Drinking Water and
Sanitation Circle, Belagavi.

NSS ASSOCIATES
Hyderabad